# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:–** ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಹಣ ಸಂದಾಯ ಮಾಡಲು ಬಳ್ಳಾರಿ ತಾಲ್ಲೂಕಿಗೆ ಹಣ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 6 ಸಿಎಂ 2008, ದಿನಾಂಕ: 07/10/2008.
2. ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 6 ಸಿಎಂ 2008, ದಿನಾಂಕ: 16/10/2008.
3. ಸರ್ಕಾರದ ಆದೇಶ ಸಂಖ್ಯೆ: ಕಂ ಇ 54 ಡಿಎಸ್ ಪಿ 2008, ದಿನಾಂಕ:17/10/2008.
4. ಸರ್ಕಾರದ ಆದೇಶ ಸಂಖ್ಯೆ: ಕಂ ಇ 54 ಡಿಎಸ್ ಪಿ 2008, ದಿನಾಂಕ:09/03/2009.
5. ತಹಸೀಲ್ದಾರ್ ಬಳ್ಳಾರಿ (ತಾ), ಬಳ್ಳಾರಿ ಜಿಲ್ಲೆ ಇವರ ಪತ್ರ ದಿನಾಂಕ: 18-03-2009.

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರಿ ಆದೇಶದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳಡಿಯ ಪಿಂಚಣಿದಾರರಿಗೆ ಸ್ಮಾರ್ಟ್ ಕಾರ್ಡ್ ಆಧಾರಿತ ಹಣ ಸಂದಾಯ ಮಾಡುವ ಯೋಜನೆಯನ್ನು ಗುಲ್ಬರ್ಗಾ, ಚಿತ್ರದುರ್ಗ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿನ ಸರ್ಕಾರಿ ಆದೇಶದಲ್ಲಿ ಪ್ರಾಯೋಗಿಕ ಯೋಜನೆಯಡಿಯಲ್ಲಿ ಮೊದಲನೆಯ ಹಂತವಾಗಿ ಬಳ್ಳಾರಿ ಜಿಲ್ಲೆಯ ಬಳ್ಳಾರಿ ತಾಲ್ಲೂಕಿನಲ್ಲಿ ಅಕ್ಟೋಬರ್ ಮಾಹೆಯ 2008 ರಿಂದ ಫೆಬ್ರವರಿ ಮಾಹೆಯ 2009 ರವರೆಗೆ ಸಾಮಾಜಿಕ ಭದ್ರತಾ ಯೋಜನೆಗಳಾದ ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ವೇತನ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲ ವೇತನದ ವಿತರಣೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4) ಗಳಲ್ಲಿನ ಆದೇಶಗಳಲ್ಲಿ ಬಳ್ಳಾರಿ ತಾಲ್ಲೂಕಿನ ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ಅಕ್ಟೋಬರ್ 2008 ರಿಂದ ಫೆಬ್ರವರಿ 2009 ರವರೆಗೆ ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳ ವಿತರಣೆಗಾಗಿ ರೂ.86.00 ಲಕ್ಷಗಳನ್ನು ಹಾಗೂ ರೂ.43,58,200 ಗಳನ್ನು ಒಟ್ಟಾರೆ ರೂ.1,29,58,200.00 ಗಳನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿನ ತಹಸೀಲ್ದಾರ್ ಬಳ್ಳಾರಿ ರವರ ಪತ್ರದಲ್ಲಿ ಬಳ್ಳಾರಿ ನಗರ ಪ್ರದೇಶದಲ್ಲಿನ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಒಟ್ಟು 7,736 ಫಲಾನುಭವಿಗಳಿರುತ್ತಾರೆಂದು ವರದಿ ಮಾಡುತ್ತಾ, ಈ ಫಲಾನುಭವಿಗಳಿಗೆ ಅಕ್ಟೋಬರ್ 2008 ಮಾಹೆಯಿಂದ ಫೆಬ್ರವರಿ 2009 ರವರೆಗಿನ ಪಿಂಚಣಿಯನ್ನು ಬ್ಯಾಂಕ್ ಉಳಿತಾಯ ಖಾತೆಯ ಮೂಲಕ ಅಥವಾ ಅಂಚೆ ಕಛೇರಿಯ ಮೂಲಕ ವಿತರಿಸಲು ರೂ. 1,54,72,000 ಗಳ ಹೆಚ್ಚುವರಿಯಾಗಿ ಬೇಕಾಗಿರುತ್ತದೆಂದು ತಿಳಿಸಿರುತ್ತಾರೆ. ತಹಸೀಲ್ದಾರ್‌ರರ ವರದಿ ಅನ್ವಯ ಬಳ್ಳಾರಿ ತಾಲ್ಲೂಕಿನ ನಗರ ಪ್ರದೇಶದಲ್ಲಿರುವ ಫಲಾನುಭವಿಗಳಿಗೆ ಕಾರಣಾಂತರಗಳಿಂದ ಸ್ಮಾರ್ಟ್‌ಕಾರ್ಡ್ ವಿತರಿಸದಿಲ್ಲದಿರುವುದರಿಂದ ಈ ಹಿಂದೆ ಇರುವ ಪದ್ಧತಿಯಂತೆ ಮನಿ ಆರ್ಡರ್ ಅಥವಾ ಬ್ಯಾಂಕ್ ಉಳಿತಾಯ ಖಾತೆಯ ಮೂಲಕ ಫಲಾನುಭವಿಗಳಿಗೆ ಪಿಂಚಣಿ ಹಣವನ್ನು ವಿತರಿಸಲು ಸರ್ಕಾರವು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಂ ಇ 54 ಡಿಎಸ್‌ಪಿ 2008, ಬೆಂಗಳೂರು, ದಿನಾಂಕ:19/03/2009.**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬಳ್ಳಾರಿ ತಾಲ್ಲೂಕಿನ ನಗರ ಪ್ರದೇಶದಲ್ಲಿರುವ ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲರ ವೇತನ ಯೋಜನೆಗಳಡಿಯಲ್ಲಿರುವ ಫಲಾನುಭವಿಗಳಿಗೆ ಸ್ಮಾರ್ಟ್

ಕಾರ್ಡ್ ವಿತರಿಸುವವರೆಗೂ ಬ್ಯಾಂಕ್ ಉಳಿತಾಯ ಖಾತೆ ಅಥವಾ ಮನಿ ಆರ್ಡರ್ ಮೂಲಕ ಅಕ್ಟೋಬರ್-08 ರಿಂದ ಮಾರ್ಚ್ -09 ಮಾಹೆಗಳ ಪಿಂಚಣಿ ಹಣ ವಿತರಿಸಲು ಸರ್ಕಾರ ಅನುಮೋದನೆ ನೀಡಿದೆ. ಈ ಫಲಾನುಭವಿಗಳಿಗೆ ಪಿಂಚಣಿ ಹಣ ವಿತರಿಸುವ ಸಲುವಾಗಿ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಖಜಾನಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಇವರಿಗೆ ತಹಸೀಲ್ದಾರ್, ಬಳ್ಳಾರಿ ತಾಲ್ಲೂಕು ಇವರು ಒದಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಕಾತ್ಯಾಯಿನಿ ದೇವಿ) 19/3/09
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ. ಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಮದು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು,(ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ.
5. ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ವಿಭಾಗ, ಗುಲ್ಬರ್ಗಾ.
6. ಜಿಲ್ಲಾಧಿಕಾರಿಗಳು , ಬಳ್ಳಾರಿ ಜಿಲ್ಲೆ, ಬಳ್ಳಾರಿ.
7. ಉಪ ವಿಭಾಗಧಿಕಾರಿಗಳು ಬಳ್ಳಾರಿ ಜಿಲ್ಲೆ, ಬಳ್ಳಾರಿ.
8. ತಹಸೀಲ್ದಾರ್, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
9. ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು, ಬಳ್ಳಾರಿ ಜಿಲ್ಲೆ.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಹೆಚ್ಚುವರಿ ಪ್ರತಿ ಮತ್ತು ಶಾಖಾ ರಕ್ಷಾ ಕಡತ.